ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 07 (192) |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು: | ಶ್ರೀ ಬಿ.ಎಂ.ಫಾರೂಖ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ: | 04-12-2023 |
| ಉತ್ತರಿಸುವ ಸಚಿವರು: | ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಷ್ಟ್ರೀಯ ವೈದ್ಯಕೀಯ ಮಂಡಳಿ (NMC)ಯ ನೂತನ ವೈದ್ಯಕೀಯ ಶಿಕ್ಷಣ ನೀತಿಯನ್ನು ಹಲವು ವಿಧದ ಅನಾನುಕೂಲಗಳನ್ನು ಒಡ್ಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಸರ್ಕಾರದ ಗಮನಕ್ಕೆ ಬಂದಿದೆ. |
| ಆ) | ಹೊಸ ನೀತಿಯ ಪ್ರಕಾರ 10 ಲಕ್ಷ ಜನಸಂಖ್ಯೆ ಪ್ರದೇಶಕ್ಕೆ ಕೇವಲ 100 ಸೀಟುಗಳನ್ನು ಒದಗಿಸಲಾಗಿದ್ದು, 2024-25ಕ್ಕೂ ಅನ್ವಯವಾಗಿದ್ದು. ಇದರಿಂದ ರಾಜ್ಯದ ಯಾವುದೇ ಭಾಗದಲ್ಲಿ ಹೊಸ ವೈದ್ಯಕೀಯ ಶಿಕ್ಷಣ ಆರಂಭಿಸಲು ಕಷ್ಟ ಸಾಧ್ಯವಾಗದಿರುವುದನ್ನು ತಪ್ಪಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ: | ಭಾರತ ಸರ್ಕಾರದ ನೀತಿಯಂತೆ ರಾಜ್ಯದ ಪ್ರತಿಯೊಂದು ಜಿಲ್ಲೆಯಲ್ಲಿ ಒಂದು ವೈದ್ಯಕೀಯ ಕಾಲೇಜನ್ನು ಸ್ಥಾಪಿಸುವ ರಾಜ್ಯ ಸರ್ಕಾರದ ಉದ್ದೇಶವನ್ನು ರಾಷ್ಟ್ರೀಯ ವೈದ್ಯಕೀಯ ಮಂಡಳಿಗೆ ಸಲ್ಲಿಸಿದ್ದು, ಈ ನಿಟ್ಟಿನಲ್ಲಿ ವಿನಾಯಿತಿಯನ್ನು ನೀಡುವಂತೆ ಕೋರಲಾಗಿದೆ.<br>ಗ್ರಾಮೀಣ ಭಾಗದಲ್ಲಿ 3000 ರೋಗಿಗಳಿಗೆ ಒಬ್ಬ ವೈದ್ಯರಿರುವ ಮಾಹಿತಿಯನ್ನು ಸಹ ರಾಷ್ಟ್ರೀಯ ವೈದ್ಯಕೀಯ ಮಂಡಳಿಗೆ ಕಳುಹಿಸಲಾಗಿದೆ. |
| ಇ) | ರಾಜ್ಯದಲ್ಲಿ ಈ ಹಿಂದೆ PPP ಮಾಡೆಲ್‌ನಲ್ಲಿ ವೈದ್ಯ ಶಿಕ್ಷಣ ಜಾರಿಯಾಗಿದ್ದರೂ ಇದುವರೆಗೂ ಕೈಗೆತ್ತಿಕೊಳ್ಳದಿರಲು ಕಾರಣವೇನು: ಇದನ್ನು ಪುನರಾರಂಭಿಸಲು ತೆಗೆದುಕೊಳ್ಳಬಹುದು ನಿರ್ಣಯಗಳಾವುವು: ವೈದ್ಯ ಶಿಕ್ಷಣಕ್ಕೆ ಸರ್ಕಾರ ಹೆಚ್ಚಿನ ಒತ್ತು ನೀಡುವುದೇ? (ಸಂಪೂರ್ಣ ವಿವರ ನೀಡುವುದು) | ಕೇಂದ್ರದ ನೀತಿ ಆಯೋಗದನ್ವಯ ಸರ್ಕಾರಿ ವೈದ್ಯಕೀಯ ಕಾಲೇಜುಗಳಿರದ ಜಿಲ್ಲೆಗಳಲ್ಲಿ ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ(ಪಿಪಿಪಿ) ಹೊಸ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭ ಮಾಡುವ ಬಗ್ಗೆ ಅವಕಾಶ ಕಲ್ಪಿಸಲಾಗಿರುತ್ತದೆ.<br>ಸರ್ಕಾರಿ ವೈದ್ಯಕೀಯ ಕಾಲೇಜುಗಳಿಲ್ಲದ ಜಿಲ್ಲೆಗಳ ಪೈಕಿ ಪ್ರಾಥಮಿಕ ಹಂತವಾಗಿ ದಾವಣಗೆರೆ, ಉಡುಪಿ, ಕೋಲಾರ ಮತ್ತು ವಿಜಯಪುರ ಜಿಲ್ಲೆಗಳಲ್ಲಿ ಪಿಪಿಪಿ ಮಾದರಿಯಲ್ಲಿ ವೈದ್ಯಕೀಯ ಕಾಲೇಜಗಳನ್ನು ಪ್ರಾರಂಭಿಸುವ ಬಗ್ಗೆ ಐಡೆಕ್ ಸಂಸ್ಥೆಯ ಸಹಯೋಗದೊಂದಿಗೆ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಲಾಗಿರುತ್ತದೆ. ಐಡೆಕ್ ಸಂಸ್ಥೆಯು ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸುವ ಬಗ್ಗೆ ಪರಿಕಲ್ಪನೆಯ ಟಿಪ್ಪಣಿ(Concept Note) ಮತ್ತು ಹರಾಜು ದಾಖಲೆ(Bidding Documents)ಗಳನ್ನು ತಯಾರಿಸಿ ಪಿಪಿಪಿ ಕೋಶಕ್ಕೆ ಸಲ್ಲಿಸಿದ್ದು, ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ. |

No: MED 150 RGU 2023

(ಡಾ:ಶರಣ ಪ್ರಕಾಶ ಆರ್ ಪಾಟೀಲ)
ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು